ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಪಶುಸಂಗೋಪನೆ ಇಲಾಖೆಯಲ್ಲಿರುವ ಯೋಜನೆಗಳ ಬಗ್ಗೆ

ಶ್ರೀ ಕಾಂತರಾಜ್(ಬಿಎಂಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

44 (42) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಪಶುಸಂಗೋಪನೆ ಇಲಾಖೆ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ಕಂಪನಿಗಳು, ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು ಮತ್ತು ಸೊಸೈಟಿಗಳ ಸಂಖ್ಯೆ ಎಷ್ಟು; ಅವು ಯಾವುವು; (ಇಲಾಖೆವಾರು, ಕೇಂದ್ರ ಕಛೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ಒದಗಿಸುವುದು)

(ಆ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಯೋಜನೆಗಳಾವುವು; (ಯೋಜನಾವಾರು ವಿವರವಾದ ಮಾಹಿತಿ ನೀಡುವುದು)

(ಇ) ಪಶುಸಂಗೋಪನೆ ಇಲಾಖೆ ಅಧೀನದಲ್ಲಿ ಎಷ್ಟು ನಿಧಿಗಳು ಇವೆ; ಇದ್ದರೆ, ಖರ್ಚು ಮಾಡಲು ಇರುವ ಮಾರ್ಗಸೂಚಿಗಳಾವುವು; ಇಲ್ಲಿಯವರೆಗೆ ಎಷ್ಟು ಹಣ ಖರ್ಚು ಮಾಡಲಾಗಿದೆ ಹಾಗೂ ಉಳಿದಿರುವ ಹಣವೆಷ್ಟು;

(ಈ) ಕಳೆದ 3 ವರ್ಷಗಳಿಂದ ಭಾರತ ಸರ್ಕಾರವು ಸದರಿ ಇಲಾಖೆಗೆ ನೀಡುತ್ತಿರುವ ಸಹಾಯ /ಪ್ರೋತ್ಸಾಹ ಧನವೆಷ್ಟು? (ವಿವರವಾದ ಮಾಹಿತಿ ನೀಡುವುದು)